ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ        ದಿನಾಂಕ : DATE : 25/08/2019

# ಸ್ಪೀಕರ್ ಚೀಟಿ ರಹಸ್ಯ ಗೌಡರ ಬಾಯಿಯಿಂದ ಹೊರಬಿತ್ತು!

ಕ.ಪ್ರ 25/8/19

## 'ನೀವು ಸಿಎಂ ಆಗಲು ಅಡ್ಡಿಯಿಲ್ಲ ಎಂದು ಬರೆದಿತ್ತು'

ಬೆಂಗಳೂರು: ಮೈತ್ರಿ ಸರ್ಕಾರದ ವಿಶ್ವಾಸಮತ ಯಾಚನೆ ವೇಳೆ ಸ್ಪೀಕರ್ ರಮೇಶ್ ಕುಮಾರ್ ಅವರು ಅಧಿವೇಶನದಲ್ಲೇ ಪ್ರತಿಪಕ್ಷ ನಾಯಕ ಬಿ.ಎಸ್.ಯಡಿಯೂರಪ್ಪ ಅವರಿಗೆ ಕಳುಹಿಸಿ ಕೊಟ್ಟಿದ್ದ ಚೀಟಿ ರಹಸ್ಯವನ್ನು ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡ ಬಹಿರಂಗ ಪಡಿಸಿದ್ದಾರೆ. ರಮೇಶ್ ಕುಮಾರ್ ಬಿಜೆಪಿ ಸರ್ಕಾರ ರಚನೆ ಪರವಾಗಿದ್ದರು ಎಂದು ಸ್ಫೋಟಕ ಮಾಹಿತಿ ಬಹಿರಂಗಪಡಿಸಿದ್ದಾರೆ.

'ಸುವರ್ಣ ನ್ಯೂಸ್'ಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿರುವ ದೇವೇಗೌಡರು, 'ಸರ್ಕಾರ ಉಳಿಸಲು ನಾವು ಯತ್ನಿಸಿದ್ದೇವೆ' ಎಂಬ ಸಿದ್ದರಾಮಯ್ಯ ಮತ್ತು ಇತರ ನಾಯಕರ ಹೇಳಿಕೆಗೆ ತಿರುಗೇಟು ನೀಡಿದ್ದಾರೆ. ಕುಮಾರಸ್ವಾಮಿ ನೇತೃತ್ವದ ಸರ್ಕಾರದ ವಿಶ್ವಾಸಮತ ಯಾಚನೆ ವೇಳೆ ಅಟೆಂಡರ್ ಮೂಲಕ ಸ್ಪೀಕರ್ ರಮೇಶ್ ಕುಮಾರ್ ಯಡಿಯೂರಪ್ಪ ಅವರಿಗೆ ಚೀಟಿ ಕಳುಹಿಸಿಕೊಡುತ್ತಾರೆ. ಆ ಚೀಟಿಯನ್ನು ಓದಿದ ಯಡಿಯೂರಪ್ಪ ನಕ್ಕು ಸುಮ್ಮನಾದರು. ಸಂಜೆ ವಿಶ್ವಾಸಮತ ಪ್ರಕ್ರಿಯೆ ಮುಗಿಸುತ್ತೇವೆ. ನೀವು ಮುಖ್ಯಮಂತ್ರಿಯಾಗಲು ಯಾವುದೇ ಸಮಸ್ಯೆ ಇಲ್ಲ ಎಂದು ಉಲ್ಲೇಖಿಸಲಾಗಿತ್ತು ಎಂದು ತಿಳಿಸಿದರು.